ಉ) ಎಷ್ಟು ಅಪಾರ್ಟ್‌ಮೆಂಟ್‌ಗಳನ್ನು ಸರ್ಕಾರಿ ನೌಕರರಿಗೆ ಒದಗಿಸಲಾಗಿದೆ?

ಇಲ್ಲ

ಬ್ಯುಡಿಸಿಲ್ ಬ್ಲಾಕ್	224
ಕೃಷ್ಣ ಬ್ಲಾಕ್	204
ಶರಾವತಿ ಬ್ಲಾಕ್	169
ಒಟ್ಟು	597

ಅಪಾರ್ಟ್‌ಮೆಂಟ್‌ಗಳನ್ನು ಸರ್ಕಾರಿ ನೌಕರರಿಗೆ ವಾಸಕ್ಕೆ ಹಂಚಿಕೆ ಮಾಡಲು ಲೋಕೋಪಯೋಗಿ ಇಲಾಖೆಗೆ ಹಸ್ತಾಂತರಿಸಲಾಗಿದೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ **1218(1387)**
ಸದಸ್ಯರ ಹೆಸರು **ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ)**
ಉತ್ತರಿಸುವ ಸಚಿವರು **ಶ್ರೀ ಬಿ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)**

ಅ ಹಿಂದುಳಿಗೆ ಗಡಿ ಪ್ರದೇಶವಾದ ಚಾಮರಾಜನಗರ ಜಿಲ್ಲೆಯಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಕೊರಡಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಬಂದಿದೆ

ಆ ಬಂದಿದ್ದಲ್ಲಿ ಯಾವ ಯಾವ ಶಾಲೆಗಳಲ್ಲಿ ಕೊರಡಿಗಳ ಕೊರತೆ ಇದೆ

ಪ್ರಾಥಮಿಕ ಶಾಲೆಗಳಿಗೆ ಯಾವುದೇ ಕೊರಡಿ ಕೊರತೆ ಇರುವುದಿಲ್ಲ ಆದರೆ ಸರ್ಕಾರಿ ಪ್ರೌಢ ಶಾಲಗಳಿಗೆ ಕೊರಡಿ ಕೊರತೆ ಇರುತ್ತದೆ ಅದರ ವಿವರ ಈ ಕೆಳಕಂಡಂತೆ ಇರುತ್ತದೆ

ಕ್ರ.ಸಂ	ಗ್ರಾಮದ ಹೆಸರು	ಸಂಖ್ಯೆ
01	ನಪಲೂರು	2
02	ಮುಳ್ಳೂರು	2
03	ಕೊಳ್ಳೇಗಾಲ	5
04	ಗುಂಬಳ್ಳಿ	5
04	ಹಿರಸವಾಡಿ	5
05	ಚಾಮರಾಜನಗರ	5

ಇ ಈ ಜಿಲ್ಲೆಯಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರುಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಬಂದಿದೆ

ಈ ಹಾಗಿದ್ದಲ್ಲಿ ಕೊರತೆಯಿರುವ ಸದರಿ ಶಿಕ್ಷಕರುಗಳನ್ನು ನೇಮಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ,

2006–07ನೇ ಸಾಲಿಗೆ ಪ್ರೌಢ ಶಾಲಾ ಶಿಕ್ಷಕರ ಕೊರತೆ ಇದ್ದು 157 ಹುದ್ದೆಗಳಿಗೆ ಈಗಾಗಲೇ ಸಂಯುಕ್ತ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಿ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಿಸಿದೆ ಅಂತಿಮ ಆಯ್ಕೆ ಪಟ್ಟಿ ಪ್ರಕಟಿಸಿದ ನಂತರ ಸಂಬಂಧ ಪಟ್ಟ ಶಾಲೆಗಳಿಗೆ ನೇಮಕಾತಿ ಮಾಡಲಾಗುವುದು

ಊ ಯಾವ ಯಾವ ಶಾಲೆಗಳಲ್ಲಿ ಶಿಕ್ಷಕರುಗಳ ಕೊರತೆ ಇದೆ ಅನುಬಂಧದಲ್ಲಿ ಒದಗಿಸಲಾಗಿದೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ **1219(1388)**

ಸದಸ್ಯರ ಹೆಸರು **ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ)**

ಉತ್ತರಿಸುವ ಸಚಿವರು **ಶ್ರೀ ಡಿ ಇಚ್ ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು)**

ಅ) ಹಿಂದುಳಿದ ಗಡಿ ಪ್ರದೇಶವಾದ ಚಾಮರಾಜನಗರ ಜಿಲ್ಲೆಯು ಸೇರಿದಂತೆ ರಾಜ್ಯಾದ್ಯಂತ ಹೊಸದಾಗಿ ಇಂಜಿನಿಯರಿಂಗ್ ಮತ್ತು ವೈದ್ಯಕೀಯ ಕಾಲೇಜುಗಳನ್ನು ಸ್ಥಾಪಿಸಲಾಗುವುದೇ,

ಹೌದು ಇಂಜಿನಿಯರಿಂಗ್ ಕಾಲೇಜುಗಳನ್ನು ಸ್ಥಾಪಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ ವೈದ್ಯಕೀಯ ಕಾಲೇಜುಗಳಿಗೆ ಸಂಬಂಧಿಸಿದಂತೆ ಸದ್ಯಕ್ಕೆ ಯಾವುದೇ ಪ್ರಸ್ತಾವನೆ ಇರುವುದಿಲ್ಲ

ಆ) ಯಾವ ಯಾವ ಜಿಲ್ಲೆಗಳಲ್ಲಿ ಹೊಸದಾಗಿ ಇಂಜಿನಿಯರಿಂಗ್ ಮತ್ತು ವೈದ್ಯಕೀಯ ಕಾಲೇಜುಗಳನ್ನು ಸ್ಥಾಪಿಸಲಾಗುವುದು,

ಇಂಜಿನಿಯರಿಂಗ್ ಕಾಲೇಜುಗಳಿಗೆ ಏರುತ್ತಿರುವ ಬೇಡಿಕೆಯನ್ನು ಗಮನದಲ್ಲಿಟ್ಟುಕೊಂಡು ಸರ್ಕಾರವು ಕುಶಾಲನಗರ, ರಾಯಚೂರು, ಚಾಮರಾಜನಗರ ಮತ್ತು ಬಳ್ಳಾರಿಗಳಲ್ಲಿರುವ ಪಾಲಿಟೆಕ್ನಿಕ್‌ಗಳನ್ನು ಇಂಜಿನಿಯರಿಂಗ್ ಕಾಲೇಜುಗಳಾಗಿ ಮೇಲ್ದರ್ಜೆಗೇರಿಸಲು ಉದ್ದೇಶಿಸಿದೆ ಜೊತೆಗೆ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಸಂಯೋಜಿತ ಇಂಜಿನಿಯರಿಂಗ್ ಕಾಲೇಜನ್ನು ಹಾಸನದಲ್ಲಿ ಆರಂಭಿಸಲು ಉದ್ದೇಶಿಸಲಾಗಿದೆ ವೈದ್ಯಕೀಯ ಕಾಲೇಜುಗಳಿಗೆ ಸಂಬಂಧಿಸಿದಂತೆ ಪ್ರಸ್ತುತ ಯಾವುದೇ ಪ್ರಸ್ತಾವನೆ ಇರುವುದಿಲ್ಲ

ಇ) ಹಿಂದುಳಿದ ಗಡಿ ಪ್ರದೇಶ ಚಾಮರಾಜನಗರ ಜಿಲ್ಲೆಗೆ ಹೊಸದಾಗಿ ಇಂಜಿನಿಯರಿಂಗ್ ಮತ್ತು ವೈದ್ಯಕೀಯ ಕಾಲೇಜನ್ನು ಮಂಜೂರು ಮಾಡಲಾಗುವುದೇ,